KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

Pavate Nagar, Dharwad
ಪಾವಟೆನಗರ, ಧಾರವಾಡ

Tel Ph No. 0836-2215267
Website : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2026/ 881

ದಿನಾಂಕ: 21/01/2026

# ಸುತ್ತೋಲೆ

**ವಿಷಯ:** ಫೆಬ್ರುವರಿ/ಮಾರ್ಚ 2026 ರಲ್ಲಿ ಜರಗುವ ಎಲ್ಲ ಸ್ನಾತಕೋತ್ತರ 1 ಮತ್ತು 3 ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) ಇಂಟರ್ನಶಿಪ್/ಪ್ರೋಜೆಕ್ಟ/ಫೀಲ್ಡ ವರ್ಕ ರಿಪೋರ್ಟ ಮೌಲ್ಯಮಾಪನ/ವೈವಾ ಶುಲ್ಕ ತುಂಬುವ ಕುರಿತು.

**ಉಲ್ಲೇಖ:** 1) ಅಧಿಸೂಚನೆ ನಂ.ಕವಿವಿ/ಪರೀಕ್ಷಾ/ಜಿಎಡಿ/2026/830, ದಿನಾಂಕ:10/01/2026.
2) ತಿದ್ದುಪಡಿ ಅಧಿಸೂಚನೆ ನಂ.ಕವಿವಿ/ಪರೀಕ್ಷಾ/ಜಿಎಡಿ/2026/830, ದಿನಾಂಕ:10/01/2026

*****

ಕರ್ನಾಟಕ ವಿಶ್ವವಿದ್ಯಾಲಯದ ಎಲ್ಲ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಆಡಳಿತಾಧಿಕಾರಿಗಳು ಹಾಗೂ ಸ್ನಾತಕೋತ್ತರ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ ಫೆಬ್ರುವರಿ/ಮಾರ್ಚ 2026 ರಲ್ಲಿ ಜರುಗುವ ಎಲ್ಲ ಸ್ನಾತಕೋತ್ತರ 1 ಮತ್ತು 3 ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) ಹಾಗೂ ಎಲ್ಲ ಡಿಪ್ಲೋಮಾ/ಸರ್ಟಿಫಿಕೇಟ್ ಕೋರ್ಸುಗಳಿಗೆ ಲಿಖಿತ ಪರೀಕ್ಷೆಗಳನ್ನು ಜರುಗಿಸುವ ಸಲುವಾಗಿ ಉಲ್ಲೇಖಿತ 1 ರ ಅಧಿಸೂಚನೆಯಲ್ಲಿ ತಿಳಿಸಲಾದ ಪರೀಕ್ಷಾ ಅರ್ಜಿ/ಶುಲ್ಕ ತುಂಬುವ ಅವಧಿಯನ್ನು ದಂಡರಹಿತವಾಗಿ ದಿನಾಂಕ:22/01/2026 ರ ವರೆಗೆ ಹಾಗೂ ಮೊದಲನೆಯ ದಂಡದೊಂದಿಗೆ ದಿನಾಂಕ:23/01/2026 ರ ವರೆಗೆ ಹಾಗೂ ಎರಡನೇಯ ದಂಡದೊಂದಿಗೆ ದಿನಾಂಕ:24/01/2026 ರ ವರೆಗೆ ವಿಸ್ತರಿಸಿ ಉಲ್ಲೇಖ 2 ರ ಮೂಲಕ ತಿದ್ದುಪಡಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದು, ಸಂಬಂಧಪಟ್ಟ ಕೋರ್ಸುಗಳ ವಿದ್ಯಾರ್ಥಿಗಳು ಇಂಟರ್ನಶಿಪ್/ಪ್ರೋಜೆಕ್ಟ / ಫೀಲ್ಡ ವರ್ಕ ರಿಪೋರ್ಟ ಮೌಲ್ಯಮಾಪನ/ವೈವಾ ಶುಲ್ಕ **ರೂ.590/-** ಗಳನ್ನು ಯಾವ ರೀತಿ ಸಂದಾಯ ಮಾಡಬೇಕೆಂದು ಕೆಲ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಮುಖ್ಯಸ್ಥರುಗಳು ದೂರವಾಣಿ ಮೂಲಕ ವಿಚಾರಿಸುತ್ತಿದ್ದು ಕಾರಣ, ಉಲ್ಲೇಖ 1 ರ ಅಧಿಸೂಚನೆಯಲ್ಲಿ ಪ್ರಸ್ತಾಪಿಸಲಾದ ಸೂಚನೆಗಳು ಭಾಗದ ಕಂಡಿಕೆ ಸಂಖ್ಯೆ 3 ರಲ್ಲಿ ಈಗಾಗಲೇ ತಿಳಿಸಿದಂತೆ ಸಂಬಂಧಪಟ್ಟ ಕೋರ್ಸುಗಳ ವಿದ್ಯಾರ್ಥಿಗಳ ಇಂಟರ್ನಶಿಪ್/ಪ್ರೋಜೆಕ್ಟ/ಫೀಲ್ಡ ವರ್ಕ ರಿಪೋರ್ಟ ಮೌಲ್ಯಮಾಪನ/ವೈವಾ ಶುಲ್ಕ **ರೂ.590/-** ಗಳು ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿ ಸೇರ್ಪಡೆಯಾಗಿಲ್ಲದಿರುವದರಿಂದ ವಿಭಾಗದ ಮುಖ್ಯಸ್ಥರು, ಸಂಯೋಜಕರು, ಆಡಳಿತಾಧಿಕಾರಿಗಳು ಹಾಗೂ ಮಹಾವಿದ್ಯಾಲಯದ ಪ್ರಾಚಾರ್ಯರು ಅಂತಹ ವಿದ್ಯಾರ್ಥಿಗಳಿಂದ ಎಲ್ಲ ಮೊತ್ತವನ್ನು ಕ್ರೋಢಿಕರಿಸಿ SBI Collect ಆನ್‌ಲೈನ್ ಮುಖಾಂತರ ವಿಶ್ವವಿದ್ಯಾಲಯಕ್ಕೆ ಭರಿಸಲು ಮತ್ತೊಮ್ಮೆ ತಿಳಿಸಲಾಗಿದೆ.

ಕುಲಸಚಿವರು(ಮೌಲ್ಯಮಾಪನ)

**ಪ್ರತಿಗಳು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:**

1) ಮುಖ್ಯಸ್ಥರು/ಸಂಯೋಜಕರು ಎಲ್ಲ ಸ್ನಾತಕೋತ್ತರ ವಿಭಾಗಗಳು ಕ.ವಿ.ವಿ ಧಾರವಾಡ.
2) ಆಡಳಿತಾಧಿಕಾರಿಗಳು ಕ.ವಿ.ವಿ ಸ್ನಾತಕೋತ್ತರ ಕೇಂದ್ರ ಗದಗ, ಹಾವೇರಿ,ಕಾರವಾರ.
3) ಕವಿವಿ ವ್ಯಾಪ್ತಿಯ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗಳಿಗೆ.
4) ಹಣಕಾಸು ಅಧಿಕಾರಿಗಳು, ಹಣಕಾಸು ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5) ಅಭಿವೃದ್ಧಿ ಅಧಿಕಾರಿಗಳು, ಅಂಕಿ ಸಂಖ್ಯೆ ವಿಭಾಗ/ ಶಿಷ್ಯವೇತನ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
6) ನಿರ್ದೇಶಕರು, ವಿದ್ಯಾರ್ಥಿ ಕಲ್ಯಾಣ ವಿಭಾಗ,/ಎಸ್‌ಸಿ/ಎಸ್‌ಟಿ/ಕೆ-1/ಓಬಿಸಿ ಘಟಕ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
7) ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (**ಅಧಿಸೂಚನೆಯನ್ನು ಕ.ವಿ.ವಿ. ಅಂತರ್ಜಾಲದಲ್ಲಿ ಬಿತ್ತರಿಸುವುದು.**)
8) ಆಪ್ತಕಾರ್ಯದರ್ಶಿಗಳು, ಕುಲಪತಿಗಳು/ಕುಲಸಚಿವರು/ಕುಲಸಚಿವರು(ಮೌಲ್ಯಮಾಪನ)/ವಿತ್ತಾಧಿಕಾರಿಗಳು, ಕ ವಿ ವಿ, ಧಾರವಾಡ.
9) ಸಿಸ್ಟಮ್ ಎನಾಲಿಸ್ಟ್, ಪರೀಕ್ಷಾ ಗಣಕಯಂತ್ರ ವಿಭಾಗ, ಕ.ವಿ.ವಿ. ಧಾರವಾಡ.
10) ಉಪಕುಲಸಚಿವರು/ ಸಹಾಯಕ ಕುಲಸಚಿವರು, ಪರೀಕ್ಷಾ/ ಹಣಕಾಸು/ ವಿದ್ಯಾಮಂಡಳ ವಿಭಾಗ, ಕ ವಿ ವಿ, ಧಾರವಾಡ.
11) ಅಧೀಕ್ಷಕರು, ಹಣಕಾಸು/ ವಿದ್ಯಾಮಂಡಳ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
12) ಅಧೀಕ್ಷಕರು, ಗೌಪ್ಯ/ ಪ್ರಶ್ನೆಪತ್ರಿಕೆ/ ಬಿ.ಎ./ಬಿ.ಕಾಂ./ಬಿ.ಎಸ್.ಸಿ./ಕಾನೂನು/ಘಟಿಕೋತ್ಸವ ಪರೀಕ್ಷಾ ವಿಭಾಗ, ಕ ವಿ ವಿ, ಧಾರವಾಡ